**ಸಾಕ್ಷಿಯನ್ನು ದಿನಾಂಕಃ 08.06.2022 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಸಿ.ಜಿ.ಕೆ ವಕೀಲರಿಂದಃ**

ದಾವಾ ಆಸ್ತಿಯು ಮೂಲ ನನ್ನ ತಂದೆಗೆ ಸೇರಿದ ಆಸ್ತಿ, ದಾವಾ ಆಸ್ತಿಯು ನನ್ನ ತಂದೆಗೆ ಸೇರಿದ ಆಸ್ತಿ ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಯನ್ನು ಹೊರತುಪಡಿಸಿ ನಿಮಗೆ ಲಕ್ಷ್ಮೀಪುರದಲ್ಲಿ ಆಸ್ತಿ ಇದ್ದು ಅದನ್ನು ಈ ದಾವೆಗೆ ಸೇರಿಸಿದ್ದೀರಾ ಎಂದರೆ ಸಾಕ್ಷಿಯು ದಾವಾ ಆಸ್ತಿಗೂ ಲಕ್ಷ್ಮೀಪುರದಲ್ಲಿರುವ ಆಸ್ತಿಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದು ನುಡಿದಿರುತ್ತಾರೆ. ದಾವಾ ಆಸ್ತಿಯ ಸರ್ವೇ ನಂಬರಿನಲ್ಲಿ 1 ಎಕರೆ ಆಸ್ತಿ ನನಗೆ ನೀಡಿರುತ್ತಾರೆ ಎಂದರೆ ಸರಿ. ದಾವಾ ಆಸ್ತಿಯು ಪ್ರತಿವಾದಿ ನನ್ನ ಅಣ್ಣನ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ, ದಾವಾ ಆಸ್ತಿಯ ಸ.ನಂಬರಿಂದ 6 ಎಕರೆ ಪೈಕಿ 3 ಎಕರೆ ಆಸ್ತಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಕೇಸು ಇರುತ್ತದೆ ಎಂದರೆ ಸರಿ . ಲಕ್ಷ್ಮೀಪುರದಲ್ಲಿರುವ ಆಸ್ತಿಯು ನನ್ನ ಸ್ವಯಾರ್ಜಿತ ಆಸ್ತಿಯಾಗಿರುತ್ತದೆ.

ನಾನು ಮತ್ತು ಪ್ರತಿವಾದಿ ಇಪ್ಪತ್ತೈದು ವರ್ಷಗಳ ಹಿಂದೆ ಬೇರೆ ಬೇರೆಯಾಗಿರುತ್ತೇವೆ ಎಂದರೆ ಸರಿ, ದಾವಾ ಆಸ್ತಿಯಲ್ಲಿ ಪ್ರತಿವಾದಿಯು ನನಗೆ ಇಸ್ಸಾ ಕೊಡಬೇಕಾಗಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ ಪ್ರತಿವಾದಿಗೆ ಸರ್ಕಾರದಿಂದ ಮಂಜೂರಾದ ಆಸ್ತಿ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಭಾಗ ಪಡೆಯಬೇಕೆಂಬ ಉದ್ದೇಶದಿಂದ ಪ್ರತಿವಾದಿಯ ವಿರುದ್ಧ ಸುಳ್ಳು ದಾವೆ ಮಾಡಿರುತ್ತೇನೆ ಎಂದರೆ ಸರಿಯಲ್ಲ, ದಾವಾ ಆಸ್ತಿಗೂ ನನಗೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**